## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಗನ್ನಾಥ ಬಿನ್ ಮಾಣಿಕಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಔರಾದ(ಬಿ) ಇವರನ್ನು ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ.

ಓದಲಾಗಿದೆ: 1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ಇವರ ಪತ್ರ ಸಂ. ಜಿಪಂಬೀ/ಸಿಬ್ಬಂದಿ-1/ಸಿಆರ್-21/2016-17/10890 ದಿನಾಂಕ: 16-07-2016.

2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 101 ವಿಸಬಿ 2016, ದಿ:18-8-2016

------

ಪ್ರಸ್ತಾವನೆ:

ಮೇಲೆ ಓದಲಾದ (1)ರ ಪ್ರಸ್ತಾವನೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೀದರ್ ಇವರು ಶ್ರೀ ಅಂಗದ ಜಿ. ಪಾಟೀಲ್, ಗುರುನಗರ ಕಾಲೋನಿ ಬೀದರ್ ಇವರು ದಿನಾಂಕ:25-04-2016 ರಂದು ಸಲ್ಲಿಸಿರುವ ದೂರಿನ ಆಧಾರದ ಮೇಲೆ ಶ್ರೀ ಜಗನ್ನಾಥ ಮಾಣಿಕಪ್ಪ, ಕಾರ್ಯನಿವಾಹಕ ಅಧಿಕಾರಿಗಳು, ಔರಾದ್(ಬಿ) ಇವರಿಗೆ ಜಾರಿಗೊಳಸಲಾಗಿರುವ ಕಾರಣ ಕೇಳುವ ನೋಟೀಸಿಗೆ ಅವರು ಲಿಖಿತ ಹೇಳಿಕೆಯಲ್ಲಿ ನೀಡಿದ ವಿವರಣೆಯಲ್ಲಿ ಕರ್ತವ್ಯಲೋಪಗಳು ಕಂಡುಬಂದಿರುವುದರಿಂದ ಇದರ ಬಗ್ಗೆ ಸತ್ಯಾಸತ್ಯತೆಯನ್ನು ತಿಳಿಯಲು ಶ್ರೀ ಗೌತಮ ಅರಳಿ ನೋಡಲ್ ಅಧಿಕಾರಿಗಳು ಸ್ವಚ್ಛ ಭಾರತ ಮಿಷನ್ ಜಿಲ್ಲಾ ಪಂಚಾಯತ್ ಬೀದರ್ ಹಾಗೂ ಔರಾದ ತಾಲ್ಲೂಕು ನೋಡಲ್ ಅಧಿಕಾರಿಗಳು, ಮತ್ತು ಇತರೆ ಅಧಿಕಾರಿಗಳನ್ನು ಒಳಗೊಂಡಂತೆ ತನಿಖೆ ನಡೆಸಿ ವರದಿ ನೀಡಲು ಸೂಚಿಸಲಾಗಿತ್ತು. ಅದರಂತೆ ಸದರಿ ದೂರಿನ ಬಗ್ಗೆ ಸತ್ಯಾಸತ್ಯತೆಯನ್ನು ಪರಿಶೀಲಿಸಿ ದಿನಾಂಕ: 11-07-2016 ರಂದು ನೀಡಿದ ವರದಿಯ ಪ್ರಕಾರ ಆರೋಪ-1 ವಾಹನಗಳ ದುರುಪಯೋಗ ಹಾಗೂ ಸುಳ್ಳು ವಿವರಣೆ ಸಲ್ಲಿಸಿರುವ ಬಗ್ಗೆ, ಆರೋಪ-2 ದಾಬಕಾ ಗ್ರಾಮ ಪಂಚಾಯತಿಯಲ್ಲಿ ಎಮ್.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಡಿ ಕರ್ತವ್ಯಲೋಪದ ಬಗ್ಗೆ, ಆರೋಪ-3 ದಾಬಕಾ ಗ್ರಾಮ ಪಂಚಾಯತಿಯಲ್ಲಿ ಬಿ.ಆರ್.ಜಿ.ಎಫ್. ಯೋಜನೆಯ ಹಣ ದುರ್ಬಳಕೆಗೆ ಸಂಬಂಧಿಸಿದಂತೆ ಕರ್ತವ್ಯಲೋಪವೆಸಗಿರುವ ಬಗ್ಗೆ, ಆರೋಪ - 4 ಮುರ್ಕಿ ಗ್ರಾಮ ಪಂಚಾಯತಿಯಲ್ಲಿ 13ನೇ ಹಣಕಾಸು ಯೋಜನೆಯಡಿ ನಡೆದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ, ಆರೋಪ-5 ಹೋಕ್ರಾಣಾ ಗ್ರಾಮ ಪಂಚಾಯತಿಯಲ್ಲಿಯ ಡಾಟಾ ಎಂಟ್ರಿ ಅಪರೇಟರ್ ಆತ್ಮಹತ್ಯೆ ಪ್ರಕರಣದಲ್ಲಿ ಎಫ್.ಐ.ಆರ್. ನಲ್ಲಿ ಇವರ ಹೆಸರು ದಾಖಲಿಸಿರುವ ಬಗ್ಗೆ, ಆರೋಪಗಳು ಮೇಲ್ನೋಟಕ್ಕೆ ಕರ್ತವ್ಯ ಲೋಪ ಎಸಗಿರುವುದು ಕಂಡುಬಂದಿರುವುದರಿಂದ

ಮೇಲೆ ಓದಲಾದ (2)ರ ಸರ್ಕಾರಿ ಆದೇಶದಲ್ಲಿ ಸದರಿ ಅಧಿಕಾರಿಯನ್ನು ಅಮಾನತ್ತುಗೊಳಿಸಿ ಆದೇಶಿಸಲಾಗಿತ್ತು. ಅಪಾದಿತ ಅಧಿಕಾರಿಯನ್ನು ಅಮಾನತ್ತುಗೊಳಿಸಿ 03 ತಿಂಗಳಗಿಂತ ಹೆಚ್ಚಿನ ಅವಧಿಯಾಗಿರುವುದರಿಂದ ಓದಲಾದ 2ನೇ ಆದೇಶದಲ್ಲಿ ಪ್ರಸ್ತಾಪಿಸಿರುವ 05 ಆರೋಪಗಳ ಬಗ್ಗೆ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಸದರಿಯವರನ್ನು ಸೇವೆಗೆ ಪುನರ್‌ಸ್ಥಾಪಿಸುವ ಬಗ್ಗೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 101 ವಿಸೇಬಿ 2016 ಬೆಂಗಳೂರು ದಿನಾಂಕ: 10.02.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಗನ್ನಾಥ ಮಾಣಿಕಪ್ಪ, ಕಾರ್ಯನಿರ್ವಾಹಕ ಅಧಿಕಾರಿಗಳು, ಇವರ ವಿರುದ್ಧದ ಆರೋಪಗಳ ಕುರಿತು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸದರಿಯವರ ಅಮಾನತ್ತು ಆದೇಶವನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಸಹಾಯಕ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತ್, ಬೀದರ್ ಇಲ್ಲಿ ಶ್ರೀಮತಿ ಚಿತ್ರಲೇಖಾ ಪಾಟೀಲ ಇವರ ಸ್ಥಳಕ್ಕೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ), 10/02/2017
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ-ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಲೆಕ್ಕಪತ್ರ-1 & 2/ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್.
4. ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್ ಇವರ ಮುಖಾಂತರ)

ಪ್ರತಿಯನ್ನು:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
3) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.